**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರ್ಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 179/2023**

**ಚಾ.ಸಾ - 7**
**ಪ್ರಾ.ಸಾ- 2**

**ಸಾಕ್ಷಿಗೆ ದಿನಾಂಕ 25-09-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಲಾಲಪ್ಪ |
| ತಂದೆಯ ಹೆಸರು | ಃ | ಸಾಬಣ್ಣ |
| ವಯಸ್ಸು | ಃ | 45 ವರ್ಷ |
| ಉದ್ಯೋಗ | ಃ | ಮುಖ್ಯ ಪೇದೆ, ಜೇವರ್ಗಿ ಪೊಲೀಸ್ ಠಾಣಾ |
| ವಾಸಸ್ಥಳ | ಃ | ಜೇವರ್ಗಿ |

**ಮುಖ್ಯವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ**

ನಾನು 2019 ರಿಂದ ಇಲ್ಲಿಯವರೆಗೆ ನಾನು ಜೇವರಗಿ ಪೋಲಿಸ ಠಾಣೆಯಲ್ಲಿ ಪೋಲಿಸ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 10-5-2023ರಂದು ಬೆಳಗಿನ ಜಾವ 4-30 ಗಂಟೆಗೆ ನಾನು ಠಾಣೆಯಲ್ಲಿ SHO ಕರ್ತವ್ಯದಲ್ಲಿದ್ದಾಗ ಚಾಸಾ-1ರವರು ಠಾಣೆಗೆ ಹಾಜರಾಗಿ ಮುದ್ದೆಮಾಲು, ಇಬ್ಬರು ಆರೋಪಿತರು ಮತ್ತು ಜಪ್ತಿ ಪಂಚನಾಮೆಯೊಂದಿಗೆ ಠಾಣೆಗೆ ಹಾಜರಾಗಿ ವರದಿ ಸಲ್ಲಿಸಿರುತ್ತಾರೆ. ದೂರಿನ ಆಧಾರದ ಮೇರೆಗೆ ಪ್ರಕರಣವನ್ನು ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ನಂತರ ಮಾನ್ಯ ನ್ಯಾಯಾಲಯಕ್ಕೆ ಮುದ್ದೆಮಾಲಿನ ಬಗ್ಗೆ ಸ್ವತ್ತಿನ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಚಾಸಾ-4 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ಆರೋಪಿತರಿಗೆ ಕಲಂ 41 Cr.PC ರಡಿಯಲ್ಲಿ ನೋಟಿಸನ್ನು ಜಾರಿ ಮಾಡಿ ಆರೋಪಿತರ ಸ್ವ-ಖುಷಿ ಹೇಳಿಕೆಯನ್ನು ಪಡೆದುಕೊಂಡು ಬಿಡುಗಡೆಗೊಳಿಸಿರುತ್ತೇನೆ.

ಈ ಪ್ರಕರಣದಲ್ಲಿ ಜಪ್ತಿಪಡಿಸಿಕೊಂಡಂತಹ ಮುದ್ದೆಮಾಲನ್ನು ಚಾಸಾ-5ರವರೊಂದಿಗೆ ರಾಸಾಯನಿಕ ಪರೀಕ್ಷೆಗಾಗಿ FSL ನಾಗನಹಳ್ಳಿ ಕಲ್ಬುರ್ಗಿಗೆ ಕಳುಹಿಸಿಕೊಟ್ಟಿರುತ್ತೇನೆ. ನಂತರ ಚಾಸಾ-5ರವರ ಹೇಳಿಕೆ ಪಡೆದುಕೊಂಡಿರುತ್ತೇನೆ. ದಿನಾಂಕ 29-08-2023ರಂದು FSL ವರದಿ ಸ್ವೀಕರಿಸಿ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ನಂತರ ಆರೋಪಿತರ ವಿರುದ್ಧ ಆರೋಪ ಸಾಬೀತಾಗಿದ್ದರಿಂದ ಆರೋಪಿತರ ವಿರುದ್ಧ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣೆ ಪತ್ರ ಸಲ್ಲಿಸಿರುತ್ತೇನೆ.

ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದೂರನ್ನು ನಿಪಿ-2 ಎಂದು ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಪ್ರಥಮ ವರ್ತಮಾನ ವರದಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪ್ರಥಮ ವರ್ತಮಾನ ವರದಿಯನ್ನು ನಿಪಿ-3 ಎಂದು ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

FSL ವರದಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ವರದಿಯನ್ನು ನಿಪಿ-4 ಎಂದು ಸಾಕ್ಷಿ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ಮುದ್ದೆಮಾಲುಗಳನ್ನು ನೋಡಿದರೆ ಗುರುತಿಸುತ್ತೇನೆ. 124 ಮದ್ಯದ ಪೌಚುಗಳನ್ನು ತೋರಿಸಲಾಗಿ ಅವುಗಳನ್ನು ಎಂ.ಒ.-1 ರಿಂದ 124 ಎಂದು ಗುರುತಿಸಲಾಯಿತು.

1ನೇ ಆರೋಪಿಯಿಂದ ಜಪ್ತಿಪಡಿಸಿಕೊಂಡಂತಹ ಹಣ ರೂ.10,150/- ಹಾಗೂ 2ನೇ ಆರೋಪಿಯಿಂದ ಜಪ್ತಿಪಡಿಸಿಕೊಂಡಂತಹ ಹಣ ರೂ.8,650/-.

**ಜಪ್ತಿಪಡಿಸಿಕೊಂಡಂತಹ ನಗದು ಹಣವನ್ನು ಜಮಾ ಮಾಡಿಲ್ಲದ ಕಾರಣ ಸಾಕ್ಷಿಯ ಮುಂದುವರೆದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ